**ಕಾರ್ಮಿಕ ನ್ಯಾಯಾಲಯ, ಮೈಸೂರು.**

**IID**:05/2025

ಡಬ್ಲ್ಯೂ.ಡಬ್ಲ್ಯೂ-1

**ದಿನಾಂಕ 02.04.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು**

**ಪಾಟೀ ಸವಾಲುಃ 2 ನೇ ಪಕ್ಷಗಾರರ ಪರ ಶ್ರೀ.ಡಿ.ಜಿ.ಪಿ. ರವರಿಂದಃ**

ಈಗ ನಾನು ಸಮಾಜ ಕಲ್ಯಾಣ ಇಲಾಖೆಯಲ್ಲಿ ಕೆಲಸ ಮಾಡುತ್ತಿರುತ್ತೇನೆ. ಸದರಿ ಇಲಾಖೆಯಲ್ಲಿ 2022 ನೇ ಇಸವಿಯಿಂದ ಕೆಲಸ ಮಾಡುತ್ತಿದ್ದೇನೆ. ಈಗಲೂ ನಾನು ಸಮಾಜ ಕಲ್ಯಾಣ ಇಲಾಖೆಯಲ್ಲಿ ಕೆಲಸ ಮಾಡುತ್ತಿರುತ್ತೇನೆ. ಆ ಸಂಬಂಧ ನಾನು ನ್ಯಾಯಾಲಯದ ಮುಂದೆ ದಾಖಲೆಯನ್ನು ಹಾಜರು ಪಡಿಸಿರುತ್ತೇನೆ. ನಾನು ಸದರಿ ಇಲಾಖೆಯಿಂದ ವೇತನ ಪಡೆಯುತ್ತಿರುವ ಬಗ್ಗೆ ದಾಖಲೆ ಇರುತ್ತದೆ, ಅದನ್ನು ನಾನು ನ್ಯಾಯಾಲಯಕ್ಕೆ ಕೊಟ್ಟಿರುತ್ತೇನೆ. ಈ ಪ್ರಕರಣದಲ್ಲಿ ನಾನು ಯಾವುದೇ ದಾಖಲೆಯನ್ನು ಹಾಜರು ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಹೊರ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದೆ ಎಂದರೆ ಸರಿಯಲ್ಲ. ನಾನು ಈಗಲೂ ಕೆಲಸ ಮಾಡುತ್ತಿರುತ್ತೇನೆ, ನನ್ನ ಸಂಬಳವನ್ನು 3 ತಿಂಗಳಿಂದ ಕಡಿತಗೊಳಿಸಿರುತ್ತಾರೆ. ಸಾಕ್ಷಿ ಮುಂದುವರೆದು ಈ ಪ್ರಕರಣ ದಾಖಲು ಮಾಡಿದ ನಂತರ ಸಂಬಳ ಕಡಿತಗೊಳಿಸಿರುತ್ತಾರೆ ಎನ್ನುತ್ತಾರೆ. ನನಗೆ ಸಂಬಳವನ್ನು ಕಚೇರಿಯಿಂದ ಕೊಡುತ್ತಿರುತ್ತಾರೆ. ಆ ಸಂಬಂಧ ನ್ಯಾಯಾಲಯದ ಮುಂದೆ ದಾಖಲೆ ಹಾಜರು ಮಾಡಿರುತ್ತೇನೆ. ನಿ.ಡಬ್ಲ್ಯೂ-1 ರ ದಾಖಲೆಯನ್ನು ಹೊರತು ಪಡಿಸಿ ನನ್ನ ಮುಂದಿನ ಸಂಬಳ ನನಗೆ ಬಂದಿರುವ ಬಗ್ಗೆ ನಾನು ದಾಖಲೆಯನ್ನು ನ್ಯಾಯಾಲಯದ ಮುಂದೆ ಕೊಟ್ಟಿರುತ್ತೇನೆ. 2 ನೇ ಪಕ್ಷಗಾರರ ಸಂಸ್ಥೆಯಲ್ಲಿ ಕೆಲಸ ಇದ್ದಾಗ ಮಾತ್ರ ನಮ್ಮನ್ನು ಕರೆಯುತ್ತಿದ್ದರು ಎಂದರೆ ಸರಿಯಲ್ಲ.

ನನ್ನನ್ನು ಕೆಲಸದಿಂದ ತೆಗೆದು ಹಾಕಿರುವ ಬಗ್ಗೆ ನಾನು ನ್ಯಾಯಾಲಯದ ಮುಂದೆ ದಾಖಲೆ ಹಾಜರು ಪಡಿಸಿರುತ್ತೇನೆ.

ನನ್ನನ್ನು ಕೆಲಸದಿಂದ ಏಕೆ ತೆಗೆದಿರುತ್ತೀರಿ ಎಂದು 2 ನೇ ಪಕ್ಷಗಾರರರಿಗೆ ತಿಳುವಳಿಕೆ ನೋಟೀಸ್ ಕೊಟ್ಟಿದ್ದೆ. ತಿಳುವಳಿಕೆ ನೋಟೀಸ್ ನ್ಯಾಯಾಲಯದ ಮುಂದೆ ಹಾಜರು ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನನಗೂ 2 ನೇ ಪಕ್ಷಗಾರರ ಸಂಸ್ಥೆಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು agency ಮುಖಾಂತರ 2 ನೇ ಪಕ್ಷಗಾರರ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುತ್ತೇನೆ ಎಂದರೆ ಸರಿಯಲ್ಲ. ಸರ್ಕಾರ ಆಗಲಿ ಅಥವಾ 2 ನೇ ಪಕ್ಷಗಾರರ ಸಂಸ್ಥೆಯಾಗಲಿ ನನ್ನನ್ನು ನೇಮಕ ಮಾಡಿಕೊಂಡಿಲ್ಲ ಎಂದರೆ ಸರಿಯಲ್ಲ. ಹೊರ ಗುತ್ತಿಗೆ ಆಧಾರದ ಮೇಲೆ ನನ್ನನ್ನು ನೇಮಕ ಮಾಡಿಕೊಂಡಿದ್ದ ಕಾರಣ ಆ ಕೆಲಸ ಮುಗಿದ ಮೇಲೆ ನನಗೂ 2 ನೇ ಪಕ್ಷಗಾರರ ಸಂಸ್ಥೆಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಆದ್ದರಿಂದ ನಾನು ಅರ್ಜಿಯಲ್ಲಿ ಕೋರಿರುವ ಪರಿಹಾರವನ್ನು ಪಡೆಯಲು ಅರ್ಹನಾಗಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಿದೆ.)

(ಮೇಲಿನ ಸಾಕ್ಷ್ಯವನ್ನು  ಸಾಕ್ಷಿಗೆ ಓದಿ, ತಿಳಿಸಿ, ಹೇಳಿದಾಗ, ಅವರು ಅದು ಸರಿ ಇದೆ ಎಂದು ಒಪ್ಪಿದ್ದಾರೆ.)

**ಅಧ್ಯಕ್ಷಾಧಿಕಾರಿಗಳು,**
**ಕಾರ್ಮಿಕ ನ್ಯಾಯಾಲಯ, ಮೈಸೂರು**